ಶಿಕ್ಷಣ ಇಲಾಖೆ, ಬೆಳಗಾವಿ ಹಾಗೂ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿಕ್ಕೋಡಿ, ಈ ವಿಷಯವನ್ನು ಸರ್ಕಾರಕ್ಕೆ ಗಮನ ತಂದಿದ್ದಾರೆ ಹೇಗೆ?

ಇ) ಈ ವಿಷಯವು ಸರ್ಕಾರದ ಮಟ್ಟದಲ್ಲಿ ಇದ್ದರೆ, ಜಿಲ್ಲಾ ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರ ಮೇಲೆ ಯಾವ ಯಾವ ಕ್ರಮ ಜರುಗಿಸಲಾಗಿದೆ.

ಈ) ಸರ್ಕಾರಕ್ಕೆ ಆರ್ಥಿಕ ಸ್ಥಿತಿಯಿಂದ ವಂಚನೆ ಮಾಡುತ್ತಿದ್ದ ಹಾಗೂ ಒಬ್ಬನೇ ಎರಡು ಹುದ್ದೆಗಳನ್ನು ಕಾರ್ಯ ನಿರ್ವಹಿಸಲು ಅನುಮತಿ ನೀಡಿದ ಬಗ್ಗೆ ಸರ್ಕಾರಿ ಅಧಿಕಾರಿಗಳೇ ಸಾಮೀಲಾಗಿ ಇರುತ್ತಾರೆ ಎಂಬುದು ಕಂಡು ಬರುತ್ತಿದೆಯಲ್ಲವೆ?

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು) :

ಅ) ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ

ಆ) ಸರ್ಕಾರದ ಗಮನಕ್ಕೆ ತಂದಿರುವುದಿಲ್ಲ

ಇ) ಪ್ರಶ್ನೆ ಉದ್ಭವಿಸುವುದಿಲ್ಲ

ಈ) ಈ ಬಗ್ಗೆ ವರದಿ ಪಡೆದು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆ ಅವ್ಯವಸ್ಥೆಗೆ ಕ್ರೀಯಾ ಯೋಜನೆ

1057 (1152) ಶ್ರೀ ವಿಶ್ವೇಶ್ವರ ಹೆಗ್ಗಡೆ ಕಾಗೇರಿ (ಅಂಕೋಲ): ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿಯ ಪ್ರತಿಷ್ಟಿತ ಕೆ.ಎಂ.ಸಿ. ಆಸ್ಪತ್ರೆಯಲ್ಲಿ ಸಮರ್ಪಕ ಸೇವೆ, ಉತ್ತಮ ವ್ಯವಸ್ಥೆ ಇಲ್ಲದಿರುವ ಸಂಗತಿ ಸರ್ಕಾರಕ್ಕೆ ತಿಳಿದಿದೆಯೆ?

ಆ) ತಿಳಿದಿದ್ದರೂ, ಸಹ ಸ್ವಾಯತ್ತ ಸಂಸ್ಥೆಯಾದ ಇದನ್ನು ಸುಧಾರಿಸಲು ಕ್ರಮ ಕೈಗೊಳ್ಳದಿರುವುದಕ್ಕೆ ಕಾರಣಗಳೇನು?

ಇ) ಈ ಆಸ್ಪತ್ರೆಯಲ್ಲಿ ವ್ಯಾಪಕ ಭ್ರಷ್ಟಾಚಾರವು ಔಷಧಿ ಖರೀದಿಯಲ್ಲಿ ನೇಮಕಾತಿಯಲ್ಲಿ ಅಕ್ರಮ ನಡೆದಿರುವುದರ ಬಗ್ಗೆ ಸರ್ಕಾರದ ನಿಲುವೇನು?

ಈ) ಇದರ ಎಲ್ಲಾ ಸುವ್ಯವಸ್ಥೆಗೆ ಸರ್ಕಾರ ಗಮನಹರಿಸಿರುವುದೆ ಹಾಗೂ ಯಾವ ಕ್ರಮ ಜರುಗಿಸಲಾಗುತ್ತದೆ?

ಉ) ಈ ಸ್ಥಿತಿಗೆ ಕಾರಣರಾರು, ಇವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗುವುದು?

ಡಾ॥ ಎ.ಬಿ. ಮಾಲಕರೆಡ್ಡಿ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ಕಿಮ್ಸ್ ಆಸ್ಪತ್ರೆಯಲ್ಲಿ ರೋಗಿಗಳಿಗೆ ಉತ್ತಮ ಸೇವೆ ನೀಡಲಾಗುತ್ತಿದೆ.

ಆ) ಐಸಿಯು, ಐಸಿಸಿಯು, ಡಯಾಲಿಸಿಸ್ ಘಟಕಗಳನ್ನು ಪ್ರಾರಂಭಿಸಲಾಗಿದೆ. ಡಯಾಗ್ನಸ್ಟಿಕ್ ಸೆಂಟರ್ ಮತ್ತು ಐಸೋಲೇಸನ್ ವಾರ್ಡ್‌ಗಳನ್ನು ನಿರ್ಮಿಸಲಾಗುತ್ತಿದೆ.

ಇ) ದೂರುಗಳು ಬಂದಿದ್ದು ವೈದ್ಯಕೀಯ ಶಿಕ್ಷಣ ನಿರ್ದೇಶಕರ ಮೂಲಕ ವಿಚಾರಣೆ ನಡೆಸಲಾಗುತ್ತಿದೆ.

ಈ) ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆಡಳಿತ ಮಂಡಳಿ ಆಸ್ಪತ್ರೆಯು ಸುವ್ಯವಸ್ಥಿತವಾಗಿ ನಡೆಸಲು ಕಾಲಕಾಲಕ್ಕೆ ಸೂಕ್ತ ಕ್ರಮ ತೆಗೆದುಕೊಳ್ಳುತ್ತಿದೆ.

ಉ) ವೈದ್ಯಕೀಯ ಶಿಕ್ಷಣ ನಿರ್ದೇಶಕರು ಸಲ್ಲಿಸುವ ವಿಚಾರಣಾ ವರದಿಯ ಆಧಾರದ ಮೇಲೆ ಸರ್ಕಾರ ತುರ್ತಾಗಿ ಕ್ರಮ ವಹಿಸುವುದು.

ಸಿ.ಇ.ಟಿ. ಪರಿಕ್ಷೆ ಬಗ್ಗೆ

1058 (1153) ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಅಂಕೋಲ): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಸಿ.ಇ.ಟಿ. ಯನ್ನು ರದ್ದುಪಡಿಸುವ ಪ್ರಸ್ತಾವನೆ ಸರ್ಕಾರಕ್ಕಿದೆಯೇ;

2) ಈ ವಿಚಾರದಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪಿನ ಸಾರಾಂಶವೇನು;

3) ಸುಪ್ರೀಂ ಕೋರ್ಟಿನ ತೀರ್ಪಿನ ವಿರುದ್ಧ ರಾಜ್ಯ ಸರ್ಕಾರ ಮೇಲ್ಮನವಿ ಸಲ್ಲಿಸಿದೆಯೇ; ಇಲ್ಲದಿದ್ದಲ್ಲಿ ಕಾರಣಗಳೇನು;

4) ಮುಂದಿನ ಸಾಲಿನಲ್ಲಿ ಸಿ.ಇ.ಟಿ. ಪರೀಕ್ಷೆಗಳನ್ನು ನಡೆಸಲು ಸರ್ಕಾರದ ನಿಲುವೇನು?

ಡಾ॥ ಎ.ಬಿ. ಮಾಲಕರೆಡ್ಡಿ (ಉನ್ನತ ಶಿಕ್ಷಣ ಸಚಿವರು):

1) ಸಿ.ಇ.ಟಿ ಯನ್ನು ರದ್ದುಪಡಿಸುವ ಪ್ರಸ್ತಾವನೆ ಸರ್ಕಾರಕ್ಕೆ ಇರುವುದಿಲ್ಲ.

2) ಹಿಂದಿನಿಂದ ಜಾರಿಯಲ್ಲಿದ ಉನ್ನಿಕೃಷ್ಣ ತೀರ್ಪನ್ನು ರದ್ದುಗೊಳಿಸಲಾಗಿದೆ. ಸರ್ಕಾರಿ ಮತ್ತು ಅನುದಾನಿತ ಖಾಸಗಿ ಕಾಲೇಜುಗಳನ್ನು ಹೊರತುಪಡಿಸಿ ಇತರೆ ಖಾಸಗಿ ಕಾಲೇಜುಗಳಲ್ಲಿ ಅಭ್ಯರ್ಥಿಗಳ ಪ್ರವೇಶವನ್ನು ಖಾಸಗಿ ಕಾಲೇಜುಗಳೆ ಪಾರದರ್ಶಕತೆಯಿಂದ ಮೆರಿಟ್ ಆಧಾರದ ಮೇಲೆ ಪ್ರವೇಶವನ್ನು ಮಾಡಿಕೊಳ್ಳಬೇಕು ಮತ್ತು ಈ ಕಾಲೇಜುಗಳ ಮೇಲೆ ಸರ್ಕಾರದ ನಿಯಂತ್ರಣವಿದ್ದು. ಸೀಟುಗಳನ್ನು ಬಡ ಮತ್ತು ಹಿಂದುಳಿದ ವರ್ಗದ ಹಿತ ಕಾಪಾಡಲು ಸರ್ಕಾರವೇ ಸೀಟುಗಳನ್ನು ಹಂಚಿಕೆ ಮಾಡಲು ತಿಳಿಸಿದೆ. ವಂತಿಕೆ ಸಂಗ್ರಹಣೆಗೆ ಮತ್ತು ಆದಾಯ ಮಾಡಿಕೊಳ್ಳಲು ಅವಕಾಶ ಇರಬಾರದೆಂದು ಸುಪ್ರೀಂ ಕೋರ್ಟಿನ ತೀರ್ಪಿನ ಸಾರಾಂಶವಾಗಿದೆ.

3) ಇಲ್ಲ

4) 2003ನೇ ಮೇ 30 ಮತ್ತು 31 ರಂದು ಸಿ.ಇ.ಟಿ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ.